(5)

(51)

ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಪುಟ್ಟಣ್ಣ ಇವರ ನಿಯಮ-72ರಡಿಯಲ್ಲಿನ ಗಮನ ಸಳೆಯುವ ಸೂಚನೆಗೆ ಉತ್ತರಿಸುವ ಬಗ್ಗೆ.

ವಿಷಯ

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಆಯುಕ್ತರು ಸುತ್ತೋಲೆ ಹೊರಡಿಸಿ ಅನಧಿಕೃತ ಶಾಲೆ, ಅನಧಿಕೃತ ಪಠ್ಯಕ್ರಮ ಬೋಧನೆ, ಅನಧಿಕೃತ ಸ್ಥಳಾಂತರ, ಅನಧಿಕೃತ ತರಗತಿ, ಅನಧಿಕೃತ ಹಸ್ತಾಂತರ ಸ್ಥಳಾಂತರ ಶಾಲೆಗಳ ಬಗ್ಗೆ ಕ್ರಮ ವಹಿಸಲು ಸುತ್ತೋಲೆ ಹೊರಡಿಸಿರುತ್ತಾರೆ. ರಾಜ್ಯದ ಖಾಸಗಿ ಅನುದಾನರಹಿತ ಶಾಲೆಗಳಲ್ಲಿ ಹೊಸದಾಗಿ ರಾಜ್ಯ ಪಠ್ಯಕ್ರಮದಲ್ಲಿ ಶಾಲೆ ನಡೆಸಲು ಅನುಮತಿ ಪಡೆದು ಶಾಲೆಗಳನ್ನು ಪ್ರಾರಂಭಿಸಿರುತ್ತಾರೆ. ಸದರಿ ಶಾಲೆಗಳಿಗೆ ಅನುಮತಿ ಕೊಡುವಾಗ ಎಲ್ಲವನ್ನು ಪರಿಶೀಲಿಸಿ ಅನುಮತಿ ನೀಡಲಾಗಿರುತ್ತದೆ. ಖಾಸಗಿ ಶಿಕ್ಷಣ ಸಂಸ್ಥೆಗಳು ರಾಜ್ಯ ಪಠ್ಯಕ್ರಮದಲ್ಲಿ ಅನುಮತಿ ಪಡೆದು ಕೇಂದ್ರ ಪಠ್ಯಕ್ರಮದ ಅನುಮತಿಗಾಗಿ ಪ್ರಸ್ತಾವನೆ ಸಲ್ಲಿಸಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಉಪನಿರ್ದೇಶಕರ ಕಛೇರಿಯ ಹಂತದಲ್ಲಿರುವ ಶಾಲೆಗಳನ್ನು ಅನದಿಕೃತ ಶಾಲೆಗಳೆಂದು ಪರಿಗಣಿಸಬಾರದು. ಇದರಿಂದ ಆ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ತುಂಬಾ ತೊಂದರೆಯಾಗುತ್ತದೆ. ಅಂತಹ ಶಾಲೆಗಳು ನಿಯಮಾನುಸಾರ ಎನ್.ಓ.ಸಿ ಪಡೆಯಲು ಸಮಯ ನೀಡಬೇಕು. ಈಗಾಗಲೇ ಅನುಮತಿ ಪಡೆದು ಶಾಲೆಗಳಲ್ಲಿ ಮೂಲಭೂತ ಸೌಲಭ್ಯ ಇದ್ದಲ್ಲಿ ಹೆಚ್ಚುವರಿ ತರಗತಿ ನಡೆಸಲು ಇಲಾಖೆಯಲ್ಲಿ ಅವಕಾಶ ಇತ್ತು. ಅಲ್ಲದೆ ಶಿಕ್ಷಣ ಇಲಾಖೆ ತನ್ನ ತಂತ್ರಾಂಶದಲ್ಲಿ 2012ರಿಂದ ಆಯಾ ಶಿಕ್ಷಣ ಸಂಸ್ಥೆಗಳ ಒಟ್ಟಾರೆ ಮಕ್ಕಳ ಸಂಖ್ಯೆ ಅನುಗುಣವಾಗಿ ಉಚಿತ ಹಾಗೂ ಕಡ್ಡಾಯ ಶಿಕ್ಷಣದಡಿಯಲ್ಲಿ ಮಕ್ಕಳ ದಾಖಲಾತಿ ನೀಡಲಾಗಿದ್ದು ಇದಕ್ಕೆ ಇಲಾಖೆಯೇ ಅನುಮೋದನೆ ನೀಡಲಾಗಿದೆ. 2024-25ನೇ ಸಾಲಿನ ಮಾನ್ಯತೆ ನವೀಕರಣ ಪ್ರಕ್ರಿಯೆಯನ್ನು ಇಲಾಖೆ ಇದುವರೆವಿಗೂ ಪ್ರಾರಂಭಿಸಿರುವುದಿಲ್ಲ. ಆದ್ದರಿಂದ ಮಾನ್ಯತೆ ನವೀಕರಣ ಹಾಗೂ ರಾಜ್ಯ ಪಠ್ಯಕ್ರಮದಲ್ಲಿ ಅನುಮತಿ ಪಡೆದು ಸ್ಯಾಟ್ಸ್‌ನಲ್ಲಿ ದಾಖಲಾಗಿರುವ ಶಾಲೆಗಳ ಮಾಹಿತಿಯನ್ನು ಪರಿಗಣಿಸದೆ ಅನಧಿಕೃತ ಶಾಲೆಗಳೆಂದು ಘೋಷಿಸುವುದನ್ನು ಕೈಬಿಡಬೇಕು ಹಾಗೂ ವಿನಾಕಾರಣ ಖಾಸಗಿ ಅನುದಾನರಹಿತ ಶಾಲೆಗಳಿಗೆ ತೊಂದರೆ ನೀಡುತ್ತಿರುವ ವಿಷಯವನ್ನು ನಿಯಮ 72ರಲ್ಲಿ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಸಚಿವರ ಗಮನ ಸೆಳೆಯುತ್ತೇನೆ.

ಉತ್ತರ

The Karnataka Educational Institutions (Issue of No objection Certificate and Control) Rules, 2022, ಸರ್ಕಾರದ ಅಧಿಸೂಚನೆ ಸಂಖ್ಯೆ:ED 63 PGC 2013, ದಿನಾಂಕ:11-05-2022ರ ನಿಯಮ-6 ರ ಉಪನಿಯಮ-4 ರಲ್ಲಿ ರಾಜ್ಯ ಪಠ್ಯಕ್ರಮದ ಶಾಲೆಗಳು ರಾಜ್ಯ ಸರ್ಕಾರದಿಂದ ನಿರಾಕ್ಷೇಪಣಾ ಪತ್ರ ಪಡೆದ ನಂತರ ಸಂಬಂಧಿಸಿದ ಸಿ.ಬಿ.ಎಸ್.ಇ./ ಐ.ಸಿ.ಎಸ್.ಇ/ಇತರೆ

ಮಾನ್ಯತೆ ಪಡೆದ ಮಂಡಳಿಯಿಂದ ಅಫಿಲಿಯೇಷನ್ ಪಡೆಯುವವರೆಗೂ ಸಂಬಂಧಿಸಿದ ಮಂಡಳಿಯ ಪಠ್ಯಕ್ರಮದ ತರಗತಿಗಳನ್ನು ಪ್ರಾರಂಭಿಸುವಂತಿಲ್ಲ ಎಂದು ತಿಳಿಸಲಾಗಿದೆ.

ಅದರಂತೆ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು, ಇವರ ದಿನಾಂಕ:09.01.2024ರ ಸುತ್ತೋಲೆಯಂತೆ ರಾಜ್ಯ ಪಠ್ಯಕ್ರಮದಲ್ಲಿ ಬೋಧಿಸಲು ಅನುಮತಿ ಪಡೆದು ಕೇಂದ್ರ ಪಠ್ಯಕ್ರಮಕ್ಕೆ ಸಂಬಂಧಿಸಿದ ಮಂಡಳಿಯಿಂದ ಅಫಿಲಿಯೇಷನ್ ಪಡೆಯದೇ ಅನಧಿಕೃತವಾಗಿ ಕೇಂದ್ರ ಪಠ್ಯಕ್ರಮದಲ್ಲಿ ಬೋಧಿಸುತ್ತಿರುವ ಖಾಸಗಿ ಅನುದಾನರಹಿತ ಶಾಲೆಗಳನ್ನು ಅನಧಿಕೃತ ಶಾಲೆಗಳೆಂದು ಪರಿಗಣಿಸಿ ನಿಯಮಾನುಸಾರ ಕ್ರಮವಹಿಸಲು ಮತ್ತು ಅನಧಿಕೃತ ಶಾಲೆಗಳ ಪಟ್ಟಿಯನ್ನು ಪ್ರಕಟಿಸಲು ಸಕ್ಷಮ ಪ್ರಾಧಿಕಾರಿಗಳಾದ ಉಪ ನಿರ್ದೇಶಕರು(ಆಡಳಿತ) ಇವರಿಗೆ ಸೂಚಿಸಲಾಗಿದೆ. ಕೇಂದ್ರ ಪಠ್ಯಕ್ರಮಕ್ಕೆ ಸಂಬಂಧಿಸಿದ ಮಂಡಳಿಯಿಂದ ಅಫಿಲಿಯೇಷನ್ ದೊರೆಯುವವರೆಗೂ ನಿಯಮಾನುಸಾರ ರಾಜ್ಯ ಪಠ್ಯಕ್ರಮವನ್ನೇ ಬೋಧಿಸುತ್ತಿರುವ ಶಾಲೆಗಳನ್ನು ರಾಜ್ಯ ಪಠ್ಯಕ್ರಮದ ಶಾಲೆಗಳೆಂದು ಪರಿಗಣಿಸಿ ಅಧಿಕೃತ ಶಾಲೆಗಳೆಂದು ಪ್ರಕಟಿಸಲು ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ ಸೂಚಿಸಿದ್ದು, ಅದರಂತೆ ಪಟ್ಟಿಯನ್ನು ಪ್ರಕಟಿಸಿರುತ್ತಾರೆ.

**ಸಂಖ್ಯೆ: ಇಪಿ 218 ಪಿಜಿಸಿ 2024.**

(ಎಸ್. ಮಧು ಬಂಗಾರಪ್ಪ)

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು